**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್.ರವಿಕುಮಾರ್ ರವರು ಕಲಬುರಗಿ ಜಿಲ್ಲೆ, ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನದ ಭಕ್ತರಿಗೆ ಶುದ್ಧ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ದೇವಸ್ಥಾನದ ಸಿಬ್ಬಂದಿಗಳಿಗೆ ಸಕಾಲದಲ್ಲಿ ವೇತನ ಪಾವತಿಯಾಗದೆ ಇರುವ ಕುರಿತು ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಹೇಳಿಕೆ:-**

**ಉತ್ತರ:**

ಕಲಬುರಗಿ ಜಿಲ್ಲೆ, ಅಫಜಲಪುರ ತಾಲ್ಲೂಕಿನ ಘತ್ತರಗಾ ಶ್ರೀ ಭಾಗ್ಯವಂತಿ ದೇವಿ ದೇವಸ್ಥಾನದಲ್ಲಿ 02 ಶುದ್ಧ ಕುಡಿಯುವ ನೀರಿನ ಘಟಕಗಳು ಇರುತ್ತವೆ ಮತ್ತು ದೇವಸ್ಥಾನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನ್ನದಾಸೋಹದಲ್ಲಿ ಊಟದ ವ್ಯವಸ್ಥೆ ಮತ್ತು ಶೌಚಾಲಯದ ವ್ಯವಸ್ಥೆ ಹಾಗೂ ದೇವಸ್ಥಾನದ ಮತ್ತು ಭಕ್ತಾದಿಗಳ ಭದ್ರತಾ ದೃಷ್ಟಿಯಿಂದ ಅತ್ಯುತ್ತಮ ಗುಣಮಟ್ಟದ ಸಿ.ಸಿ.ಕ್ಯಾಮರಾಗಳು ಅಳವಡಿಸಲಾಗಿದೆ.

ದೇವರ ದರ್ಶನಕ್ಕಾಗಿ ಬರುವ ಭಕ್ತಾದಿಗಳಿಗೆ ಸರತಿ ಸಾಲಿನ ವ್ಯವಸ್ಥೆ ಹಾಗೂ ದೇವಾಲಯದ ಸಂಪೂರ್ಣ ಆವರಣದಲ್ಲಿ ಬೆಳಕಿನ ವ್ಯವಸ್ಥೆ ಮಾಡಲಾಗಿರುತ್ತದೆ. ದೇವಾಲಯಕ್ಕೆ ಭೇಟಿ ನೀಡುವ ಭಕ್ತಾದಿಗಳಿಗೆ ಮಾರ್ಗದರ್ಶನ ನೀಡುವ ನಾಮಫಲಕವನ್ನು ಅಳವಡಿಸಲಾಗಿರುತ್ತದೆ. ತಾಯಂದಿರು ಹಾಲುಣಿಸಲು ಪ್ರತ್ಯೇಕ ಕೊಠಡಿಯನ್ನು ಕಲ್ಪಿಸಲಾಗಿರುತ್ತದೆ.

ದೇವಾಲಯಕ್ಕೆ ಪ್ರವಾಸೋದ್ಯಮ ಇಲಾಖೆಯಿಂದ ನಿರ್ಮಿಸಿದ ಒಂದು ಯಾತ್ರಿ ನಿವಾಸ ಕಟ್ಟಡವಿದ್ದು, ಇದರಲ್ಲಿನ ಒಟ್ಟು 22 ಕೊಠಡಿಗಳು ಶಿಥಿಲಾವಸ್ಥೆಯಲ್ಲಿರುತ್ತದೆ ಮತ್ತು 2 ವರ್ಷದಿಂದ ಅತೀವೃಷ್ಟಿ ಮಳೆಯು ಜಾಸ್ತಿಯಾಗಿ ಸ್ಥಳೀಯ ಸರ್ಕಾರಿ ಪ್ರೌಢಶಾಲೆಗಳು ಮಳೆಯಿಂದ ಸೋರುತ್ತಿದ್ದು, ಜಿಲ್ಲಾಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಯಾತ್ರಿನಿವಾಸದ ನೆಲಮಹಡಿ ಕಟ್ಟಡದಲ್ಲಿ ಪ್ರೌಢಶಾಲೆ ನಡೆಸಲು ಸೂಚಿಸಿರುವ ಮೇರೆಗೆ ಪ್ರೌಢಶಾಲೆಯವರು ನೆಲಮಹಡಿಯಲ್ಲಿ ತರಗತಿಗಳನ್ನು ನಡೆಸುತ್ತಿರುತ್ತಾರೆ ಹಾಗೂ ಮೊದಲನೇ ಮಹಡಿಯ ಕೊಠಡಿಗಳು ದುರಸ್ಥಿಯಲ್ಲಿರುವುದರಿಂದ ಭಕ್ತಾದಿಗಳ ಅನುಕೂಲಕ್ಕಾಗಿ ಸೂಕ್ತವಲ್ಲದ ಕಾರಣ ಬಾಡಿಗೆಗೆ ನೀಡಲಾಗುತ್ತಿರುವುದಿಲ್ಲ.

ಸದರಿ ದೇವಾಲಯದಲ್ಲಿ 04 VIP ಕೊಠಡಿಗಳ ಪ್ರತ್ಯೇಕ ಕಟ್ಟಡವಾಗಿದ್ದು, ಸುಸ್ಥಿತಿಯಲ್ಲಿರುತ್ತದೆ ಮತ್ತು ಮತ್ತೊಂದು ಪ್ರತ್ಯೇಕ ಕಟ್ಟಡವಿದ್ದು, ಸದರಿ ಕಟ್ಟಡದ ನೆಲಮಹಡಿಯಲ್ಲಿ ಭಕ್ತಾದಿಗಳಿಗೆ ನೈವೇದ್ಯ ತಯಾರಿಸಲು 14 ಕೊಠಡಿಗಳಿರುತ್ತವೆ. ಮೊದಲನೆ ಮಹಡಿಯಲ್ಲಿ 12 ಕೊಠಡಿಗಳನ್ನು ಭಕ್ತಾದಿಗಳ ಅನುಕೂಲಕ್ಕಾಗಿ ಬಾಡಿಗೆಗೆ ನೀಡಲಾಗುತ್ತಿದೆ.

ಶ್ರೀ ಭಾಗ್ಯವಂತಿ ದೇವಿ ದೇವಾಲಯದ ಸಿಬ್ಬಂದಿಗಳಿಗೆ ಸಕಾಲದಲ್ಲಿ ಪ್ರತಿ ತಿಂಗಳು ವೇತನ ಪಾವತಿಸಲಾಗುತ್ತಿದೆ.

ಕಂಇ 83 ಮುಸಪ್ರ 2024

**(ರಾಮಲಿಂಗಾರೆಡ್ಡಿ)**
**ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು.**